ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 15–11–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಾಯ್ದೆ 1996 ಮತ್ತು ಕರ್ನಾಟಕ ನಿಯಮಗಳು 2006 ರ ಸಮರ್ಪಕ ಅನುಷ್ಠಾನ ಕುರಿತು ರಾಜ್ಯಮಟ್ಟದ ಕಾರ್ಯಾಗಾರ<br><br>ಉದ್ಘಾಟನೆ:<br><br>ನ್ಯಾಯಮೂರ್ತಿ ಶ್ರೀ ಡಿ. ಹೆಚ್. ವಘೇಲಾ,<br>ಮುಖ್ಯ ನ್ಯಾಯಮೂರ್ತಿ,<br>ಕರ್ನಾಟಕ ಉಚ್ಚ ನ್ಯಾಯಾಲಯ,<br><br>ಅಧ್ಯಕ್ಷತೆ:<br><br>ಶ್ರೀ ಪಿ. ಟಿ. ಪರಮೇಶ್ವರ ನಾಯ್ಕ್,<br>ಕಾರ್ಮಿಕ ಸಚಿವರು<br><br>ಮುಖ್ಯ ಅತಿಥಿಗಳು:<br><br>ನ್ಯಾಯಮೂರ್ತಿ ಶ್ರೀ ಎನ್.ಕೆ. ಪಾಟೀಲ್,<br>ಕರ್ನಾಟಕ ಉಚ್ಚ ನ್ಯಾಯಾಲಯದ<br>ನ್ಯಾಯಮೂರ್ತಿ<br><br>ಶ್ರೀ ಪಿ.ಬಿ. ರಾಮಮೂರ್ತಿ,<br>ಅಪರ ಮುಖ್ಯ ಕಾರ್ಯದರ್ಶಿಗಳು,<br>ಕಾರ್ಮಿಕ ಇಲಾಖೆ, ಬೆಂಗಳೂರು | 16–11–2014<br><br>ಭಾನುವಾರ<br>ಬೆಳಗ್ಗೆ<br>10–00 ಗಂಟೆಗೆ | ಕೊಠಡಿ ಸಂಖ್ಯೆ 419,<br>4 ನೇ ಮಹಡಿ,<br>ವಿಕಾಸ ಸೌಧ,<br>ಬೆಂಗಳೂರು |

| | | | |
|---|---|---|---|
| | | | |

### ನಿರ್ದೇಶಕರ ಪರವಾಗಿ

## ಮಾಧ್ಯಮ ಸಂಸ್ಥೆಗಳ ಮುಖ್ಯಸ್ಥರ ಗಮನಕ್ಕೆ

ಬೆಳಗಾವಿಯಲ್ಲಿ ಡಿಸೆಂಬರ್ 9 ರಿಂದ 20 ರ ವರೆಗೆ ನಡೆಯಲಿರುವ ರಾಜ್ಯ ವಿಧಾನ ಮಂಡಲ ಅಧಿವೇಶನದ ವರದಿಗಾಗಿ ಹಾಜರಾಗ ಬಯಸುವ ಸುದ್ದಿವಾಹಿನಿಗಳು ಹಾಗೂ ರಾಜ್ಯಮಟ್ಟದ ದಿನಪತ್ರಿಕೆಗಳ ***ಮಾನ್ಯತೆ ಪಡೆದ*** ಪ್ರತಿನಿಧಿಗಳ ವಿವರಗಳನ್ನು ಸಂಸ್ಥೆಯ ಶೀರ್ಷಿಕಾ ಪತ್ರ(ಲೆಟರ್‌ಹೆಡ್)ದಲ್ಲಿ ನಮೂದಿಸಿ ಸಲ್ಲಿಸಲು ಕೋರಲಾಗಿದೆ.

ಈ ಕೆಳಗೆ ನೀಡಿರುವ ನಮೂನೆಯ ಮಾದರಿಯಲ್ಲಿ ವಿವರಗಳನ್ನು ಒದಗಿಸಿ, ಸಂಸ್ಥೆಯ ಮುಖ್ಯಸ್ಥರೇ ಶಿಫಾರಸು ಮಾಡಿರಬೇಕು. ಮುದ್ರಣ ಮಾಧ್ಯಮದ ಗರಿಷ್ಠ ನಾಲ್ಕು ಪ್ರತಿನಿಧಿಗಳು ಹಾಗೂ ವಿದ್ಯುನ್ಮಾನ ಮಾಧ್ಯಮದ ವರದಿಗಾರರು, ಕ್ಯಾಮರಾಮನ್ ಸೇರಿದಂತೆ ಗರಿಷ್ಠ 8 ಪ್ರತಿನಿಧಿಗಳಿಗೆ ಮಾತ್ರ ವಾಸ್ತವ್ಯ ವ್ಯವಸ್ಥೆ ಕಲ್ಪಿಸಲಾಗುವುದು. ಈ ಶಿಫಾರಸು ಪತ್ರ ಸಲ್ಲಿಸಲು ನವೆಂಬರ್ 25 ಕೊನೆಯ ದಿನವಾಗಿದೆ.

ವಿ.ಸೂ:

1. ಹಿಂದಿನ ಅಧಿವೇಶನದಲ್ಲಿ ಒದಗಿಸಿರುವ ಪ್ರವೇಶ ಪತ್ರ ಈ ಅಧಿವೇಶನಕ್ಕೂ ಅನ್ವಯವಾಗುತ್ತದೆ.
2. ತಡವಾಗಿ ಬಂದ ಮನವಿಗಳನ್ನು ಪುರಸ್ಕರಿಸಲು ಸಾಧ್ಯವಿಲ್ಲ.

ನಿರ್ದೇಶಕರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಗೆ,

ನಿರ್ದೇಶಕರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಬೆಂಗಳೂರು

ಮಾನ್ಯರೇ,

ವಿಷಯ: ವಿಧಾನ ಮಂಡಲ ಅಧಿವೇಶನ ವರದಿಗೆ ಪ್ರತಿನಿಧಿಗಳನ್ನು ನಿಯೋಜಿಸುವ ಬಗ್ಗೆ

ಬೆಳಗಾವಿಯಲ್ಲಿ ನಡೆಯಲಿರುವ ವಿಧಾನ ಮಂಡಲ ಅಧಿವೇಶನಕ್ಕೆ ನಮ್ಮ ಮಾಧ್ಯಮ ಸಂಸ್ಥೆಯಿಂದ ಈ ಕೆಳಕಂಡ ವರದಿಗಾರರು/ ಕ್ಯಾಮರಾಮನ್‌ಗಳನ್ನು ನಿಯೋಜಿಸಲಾಗಿದೆ.

ವಿಧಾನಸಭೆ ವರದಿ ಮಾಡುವ ವರದಿಗಾರರು/ ಕ್ಯಾಮರಾಮನ್‌ಗಳು:

| ಕ್ರ.ಸಂ. | ಹೆಸರು, ಪದನಾಮ | ಮಾನ್ಯತಾ ಪತ್ರ | ಮೊಬೈಲ್ ಸಂಖ್ಯೆ |
|---|---|---|---|

| | | ಸಂಖ್ಯೆ | |
|---|---|---|---|
| 1 | | | |
| 2 | | | |

ವಿಧಾನ ಪರಿಷತ್ ಕಲಾಪ ವರದಿ ಮಾಡುವ ವರದಿಗಾರರು/ ಕ್ಯಾಮರಾಮನ್‌ಗಳು:

| ಕ್ರ.ಸಂ. | ಹೆಸರು, ಪದನಾಮ | ಮಾನ್ಯತಾ ಪತ್ರ ಸಂಖ್ಯೆ | ಮೊಬೈಲ್ ಸಂಖ್ಯೆ |
|---|---|---|---|
| 1 | | | |
| 2 | | | |

ಸ್ಥಳ: ಸಂಸ್ಥೆಯ ಮುಖ್ಯಸ್ಥರು

ದಿನಾಂಕ:

# ಪತ್ರಿಕಾ ಪ್ರಕಟಣೆ

## ಪತ್ರಿಕೋದ್ಯಮ ಪದವೀಧರರಿಗೆ ವೃತ್ತಿ ಕೌಶಲ್ಯ ಹಾಗೂ ನಿರೂಪಣಾ ಕೌಶಲ್ಯ ತರಬೇತಿ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಬೆಂಗಳೂರು, ನವೆಂಬರ್ 15 (ಕರ್ನಾಟಕ ವಾರ್ತೆ)**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2014-15ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಪತ್ರಿಕೋದ್ಯಮ ಪದವೀಧರರಿಗಾಗಿ, ವೃತ್ತಿ ಕೌಶಲ್ಯ ಹಾಗೂ ನಿರೂಪಣಾ ಕೌಶಲ್ಯ ತರಬೇತಿ ನೀಡುವ ಮೂಲಕ ಪ್ರೋತ್ಸಾಹಿಸುವ ಕಾರ್ಯಕ್ರಮಕ್ಕಾಗಿ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ 30-11-2014ರವರೆಗೆ ವಿಸ್ತರಿಸಲಾಗಿದೆ.**

**ಪರಿಶಿಷ್ಟ ಜಾತಿಗೆ ಸೇರಿದ, ಪತ್ರಿಕೋದ್ಯಮ/ ವಿದ್ಯುನ್ಮಾನ ಮಾಧ್ಯಮ/ ಸಮೂಹ ಸಂವಹನ ವಿಷಯಗಳಲ್ಲಿ ಕನಿಷ್ಠ ಶೇ. 50ರಷ್ಟು ಅಂಕಗಳನ್ನು ಗಳಿಸಿ ಪದವಿ/ ಸ್ನಾತಕೋತ್ತರ ಪದವಿ ಪಡೆದಿರುವ, 18 ರಿಂದ 35 ವರ್ಷಗಳೊಳಗಿರುವ ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ 2.5ಲಕ್ಷ ಗಳನ್ನು ಮೀರದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.**

**ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ/ ವಿದ್ಯುನ್ಮಾನ ಮಾಧ್ಯಮ/ ಸಮೂಹ ಸಂವಹನ ವಿಷಯಗಳಲ್ಲಿ ಕನಿಷ್ಠ ಶೇ. 50ರಷ್ಟು ಅಂಕಗಳನ್ನು ಗಳಿಸಿ ಪದವಿ/ ಸ್ನಾತಕೋತ್ತರ ಪದವಿ ಪಡೆದಿರುವ, ಅಥವಾ ಪತ್ರಿಕೋದ್ಯಮ ವಿಷಯದಲ್ಲಿ**

ವ್ಯಾಸಂಗ ಮಾಡುತ್ತಿರುವ ಪದವಿಯ ಅಂತಿಮ ವರ್ಷದ ಹಾಗೂ ಸ್ನಾತಕೋತ್ತರ ಪದವಿಯ ಎರಡೂ ವರ್ಷದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಯು 18 ರಿಂದ 35 ವರ್ಷಗಳೊಳಗಿದ್ದು, ಕುಟುಂಬದ ವಾರ್ಷಿಕ ಆದಾಯ ರೂ2.5ಲಕ್ಷ ಗಳನ್ನು ಮೀರಿರಬಾರದು.

ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಪತ್ರಿಕೋದ್ಯಮ/ ವಿದ್ಯುನ್ಮಾನ ಮಾಧ್ಯಮ/ ಸಮೂಹ ಸಂವಹನ ವಿಷಯಗಳಲ್ಲಿ ಕನಿಷ್ಠ ಶೇ. 50ರಷ್ಟು ಅಂಕಗಳನ್ನು ಗಳಿಸಿ ಪದವಿ/ ಸ್ನಾತಕೋತ್ತರ ಪದವಿ ಪಡೆದಿರುವ, 18 ರಿಂದ 35 ವರ್ಷಗಳೊಳಗಿರುವ, ಕುಟುಂಬದ ವಾರ್ಷಿಕ ಆದಾಯ ರೂ 2.00 ಲಕ್ಷಗಳನ್ನು ಮೀರದಿರುವ ಹಾಗೂ ಕೆನೆಪದರ ವ್ಯಾಪ್ತಿಗೆ ಒಳಪಡದಂತಹ ಅಭ್ಯರ್ಥಿಗಳು ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಅಭ್ಯರ್ಥಿಗಳು ಪ್ರಸ್ತುತ ಸಾಲಿನಲ್ಲಿ ಇದೇ ಸ್ವರೂಪದ ತರಬೇತಿಯನ್ನು ಸರ್ಕಾರದ ಯಾವುದೇ ಇಲಾಖೆಯಿಂದ ಪಡೆದಿರಬಾರದು.

ಅರ್ಜಿಯ ನಿಗದಿತ ನಮೂನೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕೃತ ವೆಬ್‌ಸೈಟ್ www.karnatakavarthe.org ನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ದಿನಾಂಕ 30-11-2014 ರೊಳಗಾಗಿ ಸಲ್ಲಿಸಬೇಕು. ಅಪೂರ್ಣ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿ ಗೈರುಹಾಜರಾದಲ್ಲಿ ಮೆರಿಟ್ ಆಧಾರದ ಮೇಲೆ ಮುಂದಿನ ಅಭ್ಯರ್ಥಿಗೆ ಅವಕಾಶ ನೀಡಲಾಗುವುದು.

ಭರ್ತಿ ಮಾಡಿದ ಅರ್ಜಿಗಳನ್ನು ಕಳುಹಿಸಬೇಕಾದ ವಿಳಾಸ 'ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ್ ರಸ್ತೆ, ಬೆಂಗಳೂರು- 560001' ಹಾಗೂ ದಾಖಲೆಗಳ ಸಾಫ್ಟ್ ಕಾಪಿಯನ್ನು scpinformationdepartment@gmail.com ಗೆ ಇ-ಮೇಲ್ ಮಾಡಬಹುದು.

**ಪಹೊ**

## ರಾಯಚೂರು ಕೃಷಿ ವಿಶ್ವವಿದ್ಯಾಲಯಕ್ಕೆ ಕುಲಪತಿಗಳ ನೇಮಕ

ಬೆಂಗಳೂರು, ನವೆಂಬರ್ 15 (ಕರ್ನಾಟಕ ಸರ್ಕಾರ)

ರಾಯಚೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳನ್ನಾಗಿ ಧಾರವಾಡ ಕೃಷಿ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕ ಡಾ: ಸಾಲೀಮತ್, ಪಿ.ಎಂ. ಅವರನ್ನು ನಾಲ್ಕು ವರ್ಷಗಳ ಅವಧಿಗೆ ನೇಮಿಸಿ ರಾಜ್ಯಪಾಲರು ಅಧಿಸೂಚನೆ ಹೊರಡಿಸಿದ್ದಾರೆ.

**ಸಮ:ಬಾಬು:ಕೆಎಂ**

# ಕೆ.ಎ.ಎಸ್ ಮತ್ತು ಪಿ.ಎಸ್.ಐ ಪರೀಕ್ಷೆಗೆ ತರಬೇತಿ

ಬೆಂಗಳೂರು, ನವೆಂಬರ್ 15 (ಕರ್ನಾಟಕ ಸರ್ಕಾರ)

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ **'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'** ದ ವತಿಯಿಂದ ಕರ್ನಾಟಕ ಸರ್ಕಾರವು ಮುಂದೆ ನಡೆಸಲಿರುವ **ಕೆ.ಎ.ಎಸ್ ಪೂರ್ವಭಾವಿ ಪರೀಕ್ಷೆ** ಮತ್ತು **ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಪರೀಕ್ಷೆ**ಗೆ 50 ದಿನಗಳ ಕಾಲದ ತರಬೇತಿ ನೀಡಲಿದೆ.

ಆಸಕ್ತರು ದಿನಾಂಕ: 25.11.2014ರೊಳಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ **ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ** ದ ಕಛೇರಿಯಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದೆಂದು ಕರಾಮುವಿ ಕುಲಸಚಿವ **ಪ್ರೊ. ಪಿ.ಎಸ್. ನಾಯಕ್** ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗೆ 0821–2515944 ಈ ದೂರವಾಣಿ ಸಂಖ್ಯೆಯಲ್ಲಿ ಸಂಪರ್ಕಿಸಲು ಕೋರಿದೆ.

**ಸಮ:ಬಾಬು:ಕೆಎಂ**

## ವರ್ಗಾವಣೆ

ಬೆಂಗಳೂರು, ನವೆಂಬರ್ 15 (ಕರ್ನಾಟಕ ಸರ್ಕಾರ)

ಸರ್ವೆ ಮತ್ತು ಭೂ ದಾಖಲೆಗಳ ಆಯುಕ್ತ ಶ್ರೀ ಹೃತ್ವಿಕ್ ರಂಜನಂ ಪಾಂಡೆ ಅವರನ್ನು ಕೂಡಲೇ ಜಾರಿಗೆ ಬರುವಂತೆ ವಾಣಿಜ್ಯ ಇಲಾಖೆ ಆಯುಕ್ತರನ್ನಾಗಿ, ರಜೆ ಮೇಲೆ ತೆರಳುತ್ತಿರುವ ಶ್ರೀ ಅಜಯ್ ಸೇಠ್ ಅವರ ಸ್ಥಾನದಲ್ಲಿ ನೇಮಿಸಿ ಸರ್ಕಾರ ಆದೇಶ ಹೊರಡಿಸಿದೆ.

**ಸಮ:ಬಾಬು:ಕೆಎಂ**

## ರಾಜಕೀಯದಿಂದ ದೂರವಿರಲು ಸಹಕಾರಿ ಸಂಘಗಳಿಗೆ ಮುಖ್ಯಮಂತ್ರಿ ಸಲಹೆ

ಬೆಂಗಳೂರು, ನವೆಂಬರ್ 15 (ಕರ್ನಾಟಕ ಸರ್ಕಾರ)

**ಸಹಕಾರ ಸಂಘಗಳು ರಾಜಕೀಯ ರಹಿತವಾಗಿ ಕಾರ್ಯನಿರ್ವಹಿಸಿದರೆ ಮಾತ್ರ ಗ್ರಾಮೀಣಭಾಗದ ಜನರಲ್ಲಿ ಆರ್ಥಿಕ ಹಾಗೂ ಸಾಮಾಜಿಕ ಬದಲಾವಣೆಯನ್ನು ತರಲು ಸಾಧ್ಯ ಆದ್ದರಿಂದ ಸಹಕಾರ ಸಂಘಗಳು ರಾಜಕೀಯದಿಂದ ದೂರ ಇರುವಂತೆ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಸಲಹೆ ನೀಡಿದರು.**

**ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಲಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳಿ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಸಹಕಾರ ಮಹಾಮಂಡಳ ಸಂಯುಕ್ತ ಆಶ್ರಯದಲ್ಲಿ ಅರಮನೆ ಮೈದಾನದಲ್ಲಿ ಏರ್ಪಡಿಸಲಾಗಿದ್ದ 61 ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ಉದ್ಘಾಟಿಸಿ ಮಾತನಾಡಿದ ಅವರು ಹಾಲು**

ಉತ್ಪಾದಕರೇ ಸಹಕಾರ ಮಂಡಳಿಯನ್ನು ನಡೆಸಬೇಕು. ಹಾಲು ಉತ್ಪಾದನೆಯಲ್ಲಿ ಮಹಿಳೆಯರ ಪಾತ್ರ ಹೆಚ್ಚಾಗಿರುವುದರಿಂದ ಮಹಿಳಾ ಸಂಘಗಳನ್ನು ಸ್ಥಾಪಿಸುವ ಮೂಲಕ ಮಹಿಳೆಯರೇ ಎಲ್ಲಾ ಆಡಳಿತವನ್ನು ನಡೆಸಬೇಕೆಂದು ಮುಖ್ಯಮಂತ್ರಿಯವರು ಅಭಿಪ್ರಾಯಪಟ್ಟರು.

ರಾಜ್ಯದಲ್ಲಿರುವ 12,600 ಸಹಕಾರ ಸಂಘಗಳಲ್ಲಿ 2,200 ಮಹಿಳಾ ಸಂಘಗಳು ಕಾರ್ಯನಿರ್ವಹಿಸುತ್ತಿದ್ದು 23 ಲಕ್ಷ ಸದಸ್ಯರನ್ನು ಒಳಗೊಂಡಿದೆ. ಇದರಿಂದ ದಿನವೊಂದಕ್ಕೆ 65 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು ಪ್ರತಿ ದಿನ 13 ಕೋಟಿ ರೂ.ಗಳನ್ನು ಹಾಲು ಉತ್ಪಾದಕರಿಗೆ ಹಂಚಲಾಗುತ್ತಿದೆ. ಮುಂದಿನ ದಿನಗಳಲ್ಲಿ ಉತ್ತರ ಕರ್ನಾಟಕ ಸೇರಿದಂತೆ ರಾಜ್ಯಾದ್ಯಂತ ಹಾಲು ಉತ್ಪಾದಕರ ಸಂಘಗಳ ಸಂಖ್ಯೆ 20 ಸಾವಿರಕ್ಕೆ ಏರಿಕೆಯಾಗುವ ಜೊತೆಗೆ ಅದರಲ್ಲಿ ಕನಿಷ್ಠ 7 ರಿಂದ 8 ಮಹಿಳಾ ಸಂಘಗಳಿರಬೇಕೆಂದರು.

ಹಳ್ಳಿಯಿಂದ ಹಾಲು ಪಟ್ಟಣದ ಜನರಿಗೆ ಹೋಗುತ್ತಿದೆ. ಪಟ್ಟಣದಿಂದ ಆಲ್ಕೋಹಾಲ್ ಹಳ್ಳಿಗೆ ಹೋಗುತ್ತಿದೆ ಎಂದು ತಿಳಿದು ಬಂದ ಕಾರಣದಿಂದಲೇ ಮಕ್ಕಳಿಗೆ ವಾರದಲ್ಲಿ ಮೂರು ದಿನ ಹಾಲನ್ನು ನೀಡುವ ಉದ್ದೇಶದಿಂದ ಕ್ಷೀರಭಾಗ್ಯವನ್ನು ಜಾರಿಗೆ ತಂದೆ ಎಂದು ತಿಳಿಸಿದರು.

ಬಜೆಟ್‌ನಲ್ಲಿ ತಿಳಿಸಿರುವಂತೆ ಸಂಘದಲ್ಲಿ ಕಾರ್ಯನಿರ್ವಹಿಸುವವರಿಗೆ ಲೀಟರ್‌ಗೆ 20 ಪೈಸೆಯನ್ನು ನೀಡುವ ಬಗ್ಗೆ ಸರ್ಕಾರ ಶೀಘ್ರದಲ್ಲಿಯೇ ಕ್ರಮಕೈಗೊಳ್ಳಲಿದೆ. ಹಾಗೆಯೇ ಪಶು ಆಹಾರ ತಯಾರಿಕೆಗೆ ಅಗತ್ಯವಾದ ಮುಸುಕಿನ ಜೋಳವನ್ನು ರೈತರಿಂದಲೇ ನೇರವಾಗಿ ಖರೀದಿಸಲು ಅವಕಾಶ ಮಾಡಿಕೊಡಲಾಗುವುದೆಂದು ಭರವಸೆ ನೀಡಿದರು.

ಸಹಕಾರ ಹಾಗೂ ಸಕ್ಕರೆ ಸಚಿವರಾದ ಶ್ರೀ ಹೆಚ್.ಎಸ್. ಮಹದೇವಪ್ರಸಾದ್ ಅವರು ಮಾತನಾಡಿ ನಮ್ಮ ರಾಜ್ಯದಲ್ಲಿ ಮಾತ್ರ ಸಹಕಾರ ಕ್ಷೇತ್ರದಲ್ಲಿ ರೈತರಿಗೆ 3 ಲಕ್ಷದವರೆಗೆ ಶೂನ್ಯ ಬಡ್ಡಿದರದಲ್ಲಿ ಸಾಲವನ್ನು ನೀಡಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದದ ರೈತರ 36 ಕೋಟಿ ರೂ. ಸಾಲವನ್ನು ಮನ್ನ ಮಾಡಲಾಗಿದ್ದು ಪ.ಜಾ ಮತ್ತು ಪರಿಶಿಷ್ಟ ವರ್ಗದ ಮಹಿಳೆಯ ಷೇರನ್ನು ಸರ್ಕಾರವೇ ಭರಿಸುತ್ತಿದೆ ಎಂದರು.

ಸಹಕಾರಿ ಕ್ಷೇತ್ರದ ಪಿತಾಮಹರಾದ ಶ್ರೀ ಪಾಟೀಲ್ ಅವರ ನೆನಪಿಗಾಗಿ ಮಲ್ಲೇಶ್ವರಂನಲ್ಲಿ ಸಹಕಾರಿ ಭವನ ನಿರ್ಮಾಣ ಮಾಡುವ ಜೊತೆಗೆ ಮೈಸೂರಿನಲ್ಲಿ ಸಹಕಾರ ಅಕಾಡೆಮಿಯನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಬೇರೆ ರಾಜ್ಯಗಳಿಂದ ನಮ್ಮ ರಾಜ್ಯಕ್ಕೆ ಪೂರೈಕೆಯಾಗುತ್ತಿರುವ ಹಾಲಿನಲ್ಲಿ ವಿಷಯಕಾರಿಕ ಅಂಶವಿರುವುದು ಬೆಳಕಿಗೆ ಬಂದಿರುವ ಹಿನ್ನೆಲೆಯಲ್ಲಿ ವಿಷಪೂರಕ ಹಾಲು ಸರಬರಾಜು ಮಾಡುವವರ ವಿರುದ್ಧ ಕಠಿಣ ಕ್ರಮ ಜರುಗಿಸಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ಪಶುಸಂಗೋಪನೆ ಸಚಿವರದ ಶ್ರೀ ಟಿ.ಬಿ. ಜಯಚಂದ್ರ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ನಂದಿನಿಯ ಹೊಸ ಏಳು ಉತ್ಪನ್ನಗಳು ಹಾಗೂ ಹೆಚ್ಚು ಪೌಷ್ಟಿಕಾಂಶವುಳ್ಳ ನಂದಿನಿ ಗೋಲ್ಡ್ ಪಶು ಆಹಾರವನ್ನು ಮುಖ್ಯಮಂತ್ರಿಯವರು ಬಿಡುಗಡೆ ಮಾಡಿದರು.

ಸಹಕಾರಿ ಕ್ಷೇತ್ರದಲ್ಲಿ ಸಾಧನೆ ಮಾಡಿದ ಶ್ರೀ ಹನುಮಂತಯ್ಯ, ಶ್ರಿ ಎನ್.ಆರ್. ಜಗದೀಶ್, ಡಾ: ಪಿ.ವಿ. ರತ್ನ ಅರಸ್, ಶ್ರೀ ಜಯವಂತರಾವ್ ಪತಂಗೆ ಹಾಗೂ ಶ್ರೀ ಎನ್.ಆರ್. ರಂಗಯ್ಯ ಅವರಿಗ ಸಹಕಾರ ಸಚಿವರ ಶ್ರೀ ಹೆಚ್.ಎಸ್. ಮಹದೇವಪ್ರಸಾದ್ ಅವರು ಪದಕ, ಪ್ರಶಸ್ತಿ ಪತ್ರ ಹಾಗೂ 50 ಸಾವಿರ ನಗದು ಬಹುಮಾನದೊಂದಿಗೆ' "ಸಹಕಾರ ರತ್ನ" ಪ್ರಶಸ್ತಿ ಪ್ರದಾನ ಮಾಡಿದರು.

ಅಧಿಕ ಹಾಲು ಸರಬರಾಜು ಮಾಡಿದ ಹೈನುಗಾರಿಕೆ ಸಚಿವ ಶ್ರೀ ಟಿ.ಬಿ. ಜಯಚಂದ್ರ ಅವರು, ಅತ್ಯುತ್ತಮ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಸಚಿವ ಶ್ರೀ ಡಿ.ಕೆ. ಶಿವಕುಮಾರ್ ಅವರು, ಅತ್ಯುತ್ತಮ ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಸನ್ಮಾನ ಮಾಡಿ ಸಚಿವ ಶ್ರೀ ರಾಮಲಿಂಗಾರೆಡ್ಡಿ ಅವರು ಗೌರವಿಸಿದರು. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾದ ಶ್ರೀ ಜಿ.ಟಿ. ದೇವೇಗೌಡ ಅವರು ಕ್ಷೀರಸಾಗರದ ವಿಶೇಷ ಸಂಚಿಕೆಯನ್ನು ಹಾಗೂ ಕರ್ನಾಟಕ ಹಾಲು ಮಹಾಮಂಡಳದ ಅಧ್ಯಕ್ಷರಾದ ಶ್ರೀ ಪಿ. ನಾಗರಾಜು ಅವರು ಮಂಡಳದ ವಿಷನ್ 2025 ಯೋಜನಾ ಹೊತ್ತಿಗೆಯನ್ನು ಬಿಡುಗಡೆ ಮಾಡಿದರು.

ಸಮಾರಂಭದಲ್ಲಿ ಸಹಕಾರ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಶ್ರಿ ಎಂ. ಮದನ್‌ಗೋಪಾಲ್, ಸಹಕಾರ ಸಂಘಗಳ ನಿಬಂಧಕರಾದ ಡಾ: ಎನ್.ಎಸ್. ಚನ್ನಪ್ಪಗೌಡ, ಕರ್ನಾಟಕ ಹಾಲು ಮಹಾಮಂಡಳಿಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಎ.ಎಸ್. ಪ್ರೇಮನಾಥ್ ಕರ್ನಾಟಕ ರಾಜ್ಯ ಮಹಿಳಾ ಸಹಕಾರ ಮಹಾ ಮಂಡಳದ ಅಧ್ಯಕ್ಷರಾದ ಶ್ರೀಮತಿ ಶಕುಂತಲಾ ಬೆಳ್ದಾಳೆ, ನಿವೃತ್ತ ಮುಖ್ಯ ಕಾರ್ಯದರ್ಶಿ ಶ್ರೀ ಎಸ್.ವಿ. ರಂಗನಾಥ್, ಜಿಲ್ಲಾ ಹಾಲು ಒಕ್ಕೂಟದ ಅಧ್ಯಕ್ಷರುಗಳು, ಕರ್ನಾಟಕ ಹಾಲು ಮಹಾಮಂಡಳಿಯ ನಿರ್ದೇಶಕರುಗಳು ಸೇರಿದಂತೆ ಮತ್ತಿತರ ಗಣ್ಯ ವ್ಯಕ್ತಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

**ಸಮ:ಬಿಜಿಪಿ:ಕೆಎಂ**

## ಮೂಲ ದಾಖಲೆ ಪರಿಶೀಲನೆ

ಬೆಂಗಳೂರು, ನವೆಂಬರ್ 15 (ಕರ್ನಾಟಕ ಸರ್ಕಾರ)

ಕರ್ನಾಟಕ ಲೋಕಸೇವಾ ಆಯೋಗವು 25-9-2014 ರ ಅಧಿಸೂಚನೆಯಲ್ಲಿ ಅಧಿಸೂಚಿಸಲಾದ ಆಯುಷ್ ಇಲಾಖೆಯಲ್ಲಿನ ವೈದ್ಯಾಧಿಕಾರಿ(ಯುನಾನಿ) 09 ಬ್ಯಾಕ್‌ಲಾಗ್ ಹುದ್ದೆಗಳು ಹಾಗೂ ವೈದ್ಯಾಧಿಕಾರಿ (ಪ್ರಕೃತಿ ಚಿಕತ್ಸೆ ಮತ್ತು ಯೋಗ) ಬ್ಯಾಕ್‌ಲಾಗ್ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 27-11-2014 ರಂದು ಬೆಳಿಗ್ಗೆ 10-30 ಗಂಟೆಗೆ ಮೂಲ ದಾಖಲೆಗಳ ಪರಿಶೀಲನೆಯನ್ನು ಆಯೋಗದ ಕೇಂದ್ರ ಕಚೇರಿ, ಉದ್ಯೋಗ ಸೌಧ, ಬೆಂಗಳೂರು -560 001 ಇಲ್ಲಿ ನಡೆಸಲಿದೆ.

ಅಭ್ಯರ್ಥಿಗಳು ಅವರ ಆನ್‌ಲೈನ್ ಅರ್ಜಿಯಲ್ಲಿ ನೀಡಿರುವ ಮಾಹಿತಿಯ ಆಧಾರದಂತೆ ತಾತ್ಕಾಲಿಕವಾಗಿ ಅರ್ಹರೆಂದು ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ, ಪರಿಶೀಲನೆಯ ವೇಳೆ ಮತ್ತು ದಿನಾಂಕ, ತಿರಸ್ಕೃತ

ಅಭ್ಯರ್ಥಿಗಳ ಪಟ್ಟಿ, ಇತ್ಯಾದಿ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್" httP;//kpsc.kar.nic.in/Home Page ನ್ನು ನೋಡಬಹುದು. ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರ ಸ್ವೀಕೃತವಾಗದಿದ್ದಲ್ಲಿ ಸಂಬಂಧಿತ ದಾಖಲೆಗಳೊಂದಿಗೆ ಕೇಂದ್ರ ಕಚೇರಿಯನ್ನು ಮೂಲ ದಾಖಲಾತಿಗಳ ಪರಿಶೀಲನೆಗೆ ನಿಗದಿಪಡಿಸಿರುವ ದಿನಾಂಕದೊಳಗೆ ಸಂಪರ್ಕಿಸಬಹುದು.

**ಸಮ:ಬಾಬು:ಕೆಎಂ**

# Crafts Exam

Bangalore, November 15(Karnataka Information)

Theory Exam for Craft course in Tailoring which will be conducted by the Board of Technical Examination for November/December 2014 will be held on 6-12-2014 Saturday on at 11 am to 2 pm. The Practical Exams will be conducted after theory exam on 6-12-2014. The detailed Time Table will be announced by the respective Chief Superintendent/Officer of Exams., All the concerned students are here by inform to contact and collect the admission Tickets from the concerned Institution/Exam Centre.

**ಸಮ:ಬಾಬು:ಕೆಎಂ**

## ಗಂಗಾ ಕಲ್ಯಾಣ ಯೋಜನೆಯಡಿ 48,613 ಕೊಳವೆಬಾವಿ: ಸಚಿವ ಎಚ್. ಆಂಜನೇಯ

ಬೆಂಗಳೂರು, ನ. 15 (ಕರ್ನಾಟಕ ವಾರ್ತೆ)-

ಗಂಗಾ ಕಲ್ಯಾಣ ಯೋಜನೆಯಡಿ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಲ್ಲ 14-15ನೇ ಸಾಅಗೆ ಜನವರಿಯಿಂದ 48,613 ಕೊಳವೆಬಾವಿಗಳನ್ನು ಕೊರೆಸಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಎಚ್.ಆಂಜನೇಯ ಅವರು ತಿಳಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸಕ್ತ ವರ್ಷದಲ್ಲಿ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ 28,666, ಪರಿಶಿಷ್ಟ ವರ್ಗದ ಅಭಿವೃದ್ಧಿ ನಿಗಮದಿಂದ 13952 ಹಾಗೂ ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ 5,995 ಕೊಳವೆಬಾವಿಗಳನ್ನು ಕೊರೆಸಲಾಗುವುದು ಎಂದರು.

ಒಂದು ಕೊಳವೆಬಾವಿ ಕೊರೆಸಿ, ಪಂಪ್ ಅಳವಡಿಕೆ ಮತ್ತು ವಿದ್ಯುತ್ ಸಂಪರ್ಕ ಕಲ್ಪಿಸಲು ಒಟ್ಟು 2.50 ಲಕ್ಷ ವೆಚ್ಚವಾಗುವುದು. ಈ ಘಟಕವೆಚ್ಚದಂತೆ ಒಟ್ಟು 1,215 ಕೋಟಿ ರೂ. ವೆಚ್ಚವಾಗಲಿದೆ ಎಂದರು. ಈ ಸಂಬಂಧ ಡಿಸೆಂಬರ್ ಒಳಗಾಗಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದ್ದು, ಪ್ರಥಮ ಬಾರಿಗೆ ಟೆಂಡರುದಾರರಿಗೆ ಜಿಪಿಎಸ್ ಅಳವಡಿಸಲು ಸೂಚಿಸಲಾಗಿದೆ ಎಂದು ನುಡಿದರು.

ಹಿಂದಿನ ಸಾಲಿನಲ್ಲಿ ಕೊರೆದ ಸುಮಾರು 33,090 ಕೊಳವೆಬಾವಿಗಳ ಪೈಕಿ 24,144 ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ ಎಂದ ಅವರು ಅಂತರ್ಜಲ ಇರುವ ಕಡೆಯೇ ಕೊಳವೆಬಾವಿ ಕೊರೆಯಲು ಚಿಂತಿಸಲಾಗಿದೆ ಎಂದು ತಿಳಿಸಿದರು.

ಸಮ